ZillaPanchayats have to mobilised the remaining funds from J.R.Y. and other sources,and also due to the fact of identification of sides, preparation of plans and estimates. Now the construction is under progress in various stages. However 5115 classrooms undertaken during previous years have been completed this year.

ನರಸಿಂಹರಾಜ ಕ್ಷೇತ್ರದಲ್ಲಿ ಅಲ್ಪಸಂಖ್ಯಾತರ ವಿದ್ಯಾಭ್ಯಾಸಕ್ಕೆ ಸರ್ಕಾರಿ ಎಸ್. ಎಸ್. ಎಲ್.ಸಿ. ಹಾಗೂ ಪಿ.ಯು.ಸಿ. ಮಂಜೂರು ಮಾಡುವ ಬಗ್ಗೆ

436 (325) ಶ್ರೀ ಇ. ಮಾರುತಿರಾವ್ ಪವಾರ್ : ಮಾನ್ಯ ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

1) ನರಸಿಂಹರಾಜ ಕ್ಷೇತ್ರಕ್ಕೆ ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡಲು ಬಡಕುಟುಂಬದ ಕೂಲಿ ಕಾರ್ಮಿಕವರ್ಗ, ಅಲ್ಪಸಂಖ್ಯಾತರು, ಪರಿಶಿಷ್ಟ ಜನಾಂಗದ ಹಾಗೂ ಇತರ ವರ್ಗದ ವಿದ್ಯಾಭ್ಯಾಸಕ್ಕೆ ಸರ್ಕಾರಿ ಎಸ್ ಎಸ್ ಎಲ್‌ಸಿ ಹಾಗೂ ಪಿಯುಸಿ ಶಾಲೆ ಮಂಜೂರಾತಿ ಅತ್ಯವಶ್ಯಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಹಾಗಿದ್ದಲ್ಲಿ 1998 ನೇ ಸಾಲಿನಲ್ಲಿ ಮಂಜೂರಾತಿ ನೀಡುವಲ್ಲಿ ಸರ್ಕಾರ ತೆಗೆದುಕೊಂಡ ಕ್ರಮವೇನು?

ಶ್ರೀ. ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು)

1) ನರಸಿಂಹರಾಜ ಕ್ಷೇತ್ರದಲ್ಲಿ 2 ಸರ್ಕಾರಿ ಪದವಿ ಪೂರ್ವ ಕಾಲೇಜುಗಳು, 3 ಅನುದಾನಿತ ಖಾಸಗಿ ಪ.ಪೂ. ಕಾಲೇಜುಗಳು ಹಾಗೂ 6 ಅನುದಾನ ರಹಿತ ಖಾಸಗಿ ಪ.ಪೂ. ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಈಗಿರುವ ಕಾಲೇಜುಗಳ ಸಂಖ್ಯೆಯನ್ನು ಗಮನಿಸಿದಾಗ ನರಸಿಂಹರಾಜ ಕ್ಷೇತ್ರಕ್ಕೆ ಮತ್ತೊಂದು ಸರ್ಕಾರಿ ಪದವಿ ಪೂರ್ವ ಕಾಲೇಜಿನ ಅಗತ್ಯಕತೆ ಇರುವುದಿಲ್ಲ.

ನರಸಿಂಹರಾಜ ಕ್ಷೇತ್ರದಲ್ಲಿ ಒಟ್ಟು 23 ಪ್ರೌಢಶಾಲೆಗಳಿದ್ದು, ಅವುಗಳಲ್ಲಿ 10 ಅನುದಾನಿತ ಪ್ರೌಢಶಾಲೆಗಳು 3 ಸರ್ಕಾರಿ ಪ್ರೌಢಶಾಲೆಗಳು ಸಹಾಗೂ 10 ಅನುದಾನ ರಹಿತ ಪ್ರೌಢಶಾಲೆಗಳು ಇವೆ. 1997-98ನೇ ಸಾಲಿನಲ್ಲಿ ಯಾವುದೇ ಸರ್ಕಾರಿ ಪ್ರೌಢಶಾಲೆ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡಬಾರದೆಂದು ಸರ್ಕಾರದ ನೀತಿಯ ಹಿನ್ನೆಲೆಯಲ್ಲಿ ಯಾವುದೇ ಸರ್ಕಾರಿ ಪ್ರೌಢಶಾಲೆಗಳನ್ನು ಹಾಗೂ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡಿಲ್ಲ. ಈ ಕ್ಷೇತ್ರಕ್ಕೆ ಮತ್ತೊಂದು ಪ್ರೌಢಶಾಲೆಯ ಅಗತ್ಯತೆ ಇದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಂದ ಪ್ರಸ್ತಾವನೆ ಪಡೆದು ಸೂಕ್ತ ಸಮಯದಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ನರಸಿಂಹರಾಜ ಕ್ಷೇತ್ರದಲ್ಲಿ ಸೂಪರ್ ಸ್ಪೆಷಲ್ 150 ಹಾಸಿಗೆಯುಳ್ಳ (ಆಕ್ಸಿಡೆಂಟ್ ಹಾಸ್ಪಿಟಲ್) ಕಟ್ಟಡ ನಿರ್ಮಾಣ

437 (329) ಶ್ರೀ ಇ. ಮಾರುತಿರಾವ್ ಪವಾರ್ (ನರಸಿಂಹರಾಜ್) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?